ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದಪ್ರಶ್ನೆಸಂಖ್ಯೆ : 306

ಮಾನ್ಯ ಸದಸ್ಯರ ಹೆಸರು : ಶ್ರೀ ಅರುಣ್ ಶಹಾಪುರ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ಸಚಿವರು : ಮುಖ್ಯಮಂತ್ರಿ

ಉತ್ತರಿಸಬೇಕಾದ ದಿನಾಂಕ : 17.02.2022

	ಪ್ರಶ್ನೆ	ಉತ್ತರ
(ಅ)	ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಂತೆ ಆರ್ಥಿಕ ಮಿತವ್ಯಯದ ಆದೇಶ ಹೊರಡಿಸಿದ್ದು, ಯಾವಾಗ; ಆದೇಶದ ಪ್ರತಿ ಒದಗಿಸುವುದು ಈ ಆದೇಶವನ್ನು ಸಂಪೂರ್ಣವಾಗಿ ಹಿಂಪಡೆಯಲಾಗಿದೆಯೇ: ಸಡಿಲಿಕೆಗೊಳಿಸಲಾಗಿದೆಯೇ: (ಆದೇಶದ ಪ್ರತಿ ಒದಗಿಸುವುದು)	ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಮತ್ತು ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವುದು ನಿವಾರ್ಯವಾಗಿರುವುದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಮತ್ತು ವೇತನಾನುದಾನಕ್ಕೆ ಒಳಪಡಿಸುವ ಕುರಿತಂತೆ ನಿರ್ಬಂದ ವಿಧಿಸಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ: 10-06-2020ರಲ್ಲಿ ಸೂಚನೆ ಗಳನ್ನು ನೀಡಲಾಗಿರುತ್ತದೆ (ಪ್ರತಿ ಲಗತ್ತಿಸಿದೆ).
(ಆ)	ಈ ಆದೇಶದಿಂದ ಖಾಲಿ ಹುದ್ದೆಗಳು ಭರ್ತಿಯಾಗದೇ ಅನೇಕ ಅಭ್ಯರ್ಥಿಗಳು ವಯೋಮಿತಿ ಮೀರಿ ಉದ್ಯೋಗ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅಭ್ಯರ್ಥಿಗಳ ವಯೋಮಿತಿ ಸಡಿಲಿಕೆಗೆ ಸರ್ಕಾರ ಅವಕಾಶ ಕಲ್ಪಿಸುವುದೇ;	ಆರ್ಥಿಕ ಮಿತವ್ಯಯ ಆದೇಶದ ಹೊರತಾಗಿಯೂ ಶೈಕ್ಷಣಿಕ ಹಿತದೃಷ್ಟಿ ಮತ್ತು ಅಭ್ಯರ್ಥಿಗಳ ವಯೋಮಿತಿ ಮೀರುವುದನ್ನು ಪರಿಗಣಿಸಿ, ಖಾಸಗಿ ಅನುದಾನಿತ ಪ್ರೌಢಶಾಲೆ, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ದಿನಾಂಕ: 31.12.2015 ರ ಅಂತ್ಯಕ್ಕೆ ನಿವೃತ್ತಿ, ಮರಣ, ರಾಜೀನಾಮೆ ಇತರೆ ಕಾರಣಗಳಿಂದ ಖಾಲಿ ಉಂಟಾಗಿರುವ ಹುದ್ದೆಗಳ ಪೈಕಿ ಈಗಾಗಲೇ ಸರ್ಕಾರದಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯಲ್ಲಿ ಅಂತಿಮ ಹಂತದಲ್ಲಿ ಬಾಕಿ ಇರುವ ಕ್ರಮವಗಾಗಿ 2757, 172 ಮತ್ತು 371 ಬೋಧಕ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ನೀಡಲು ಸಹಮತಿಸಲಾಗಿರುತ್ತದೆ.
(ಇ)	ಈ ಆರ್ಥಿಕ ಮಿತವ್ಯಯದ ಆದೇಶವನ್ನು ಯಾವಗ ಸಂಪೂರ್ಣವಾಗಿ ಹಿಂಪಡೆಯಲಾಗುವುದು? (ಸಂಪೂರ್ಣ ವಿವರ ನೀಡುವುದು)	ರಾಜ್ಯದ ಆರ್ಥಿಕ ಸ್ಥಿತಿಯು ಸುಸ್ಥಿತಿಗೆ ಬಂದ ನಂತರ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು.

ಸಂಖ್ಯೆ: ಆಇ 97 ವೆಚ್ಚ-8/2022

(ಬಸವರಾಜ ಬೊಮ್ಮಾಯಿ)
ಮುಖ್ಯ ಮಂತ್ರಿ